ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ
ಒಟ್ಟು ಪ್ರಶ್ನೆಗಳು – ೧೫

ಪಟ್ಟಿ–೧೪

# ಕರ್ನಾಟಕ ವಿಧಾನ ಪರಿಷತ್ತು

## ನೂರ ಮೂವತ್ತನೆಯ ಅಧಿವೇಶನ
## (ಮುಂದುವರೆದ ಉಪವೇಶನ)
## ಮಂಗಳವಾರ, ದಿನಾಂಕ: ೧೨ನೇ ಜುಲೈ ೨೦೧೬

---

**ಸಮೂಹ – II**

೧. ಇಂಧನ ಸಚಿವರು
೨. ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು
೩. ಸಹಕಾರ ಮತ್ತು ಸಕ್ಕರೆ ಸಚಿವರು
೪. ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು
೫. ಕೃಷಿ ಸಚಿವರು
೬. ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು
೭. ಪಶುಸಂಗೋಪನೆ ಮತ್ತು ರೇಷ್ಮೆ ರಾಜ್ಯ ಸಚಿವರು

---

## ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಪಶು ವೈದ್ಯಕೀಯ ಕಾಲೇಜು ಪ್ರಾರಂಭಿಸುವುದರ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) –**

೨೫೬ (೨೦೪೯) ಪಶುಸಂಗೋಪನೆ ಮತ್ತು ರೇಷ್ಮೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಪಶು ವೈದ್ಯಕೀಯ ಕಾಲೇಜನ್ನು ಪ್ರಾರಂಭಿಸಲು ಕರ್ನಾಟಕ ಗೃಹ ಮಂಡಳಿ ಬೆಂಗಳೂರು, ಇವರಿಗೆ ಟೆಂಡರ್ ವಹಿಸಲಾಗಿದ್ದು, ನಿರ್ಮಾಣ ಕಾರ್ಯವು ಯಾವ ಹಂತದಲ್ಲಿದೆ ; ಕಾಮಗಾರಿಯನ್ನು ಪ್ರಾರಂಭಗೊಳಿಸುವುದು ಯಾವಾಗ ; ಕಾಲೇಜನ್ನು ಪ್ರಾರಂಭಿಸಲಾಗುವುದು ಯಾವಾಗ ;

(ಆ) ರಾಜ್ಯದಲ್ಲಿ ಪಶು ವೈದ್ಯಕೀಯ ಆಸ್ಪತ್ರೆಯಲ್ಲಿ ಖಾಲಿ ಇರುವ ಪಶು ವೈದ್ಯರ ಹುದ್ದೆಗಳ ಸಂಖ್ಯೆ ಎಷ್ಟು ; ಸದರಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಇ) ರಾಜ್ಯದಲ್ಲಿ ಕೊರತೆ ಇರುವ ಪಶು ವೈದ್ಯರುಗಳ ಬೇಡಿಕೆ ಸರಿಪಡಿಸಲು ಇಲಾಖೆ ಮುಂದಿರುವ ಪ್ರಸ್ತಾವನೆಗಳಾವುವು ; ವೈದ್ಯರುಗಳ ಕೊರತೆಯಿಂದ ರೈತರು ಸಂಕಷ್ಟಕ್ಕೀಡಾಗುವುದರ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಈ) ರಾಜ್ಯದಲ್ಲಿರುವ ಒಟ್ಟು ಪಶು ವೈದ್ಯಕೀಯ ಕಾಲೇಜುಗಳ ಸಂಖ್ಯೆ ಎಷ್ಟು ; ಕಾಲೇಜುಗಳಿಗೆ ಬೇಡಿಕೆ ಇರುವುದು ಎಷ್ಟು ? (ವಿವರ ನೀಡುವುದು)

**ಕೊಡಗು ಜಿಲ್ಲೆಯಲ್ಲಿನ ಶಿಥಿಲಾವಸ್ಥೆಯಲ್ಲಿರುವ ಸರ್ಕಾರಿ ಕಟ್ಟಡಗಳ ದುರಸ್ಥಿ**

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)** –

೨೫೭ (೨೦೧೭) ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕೊಡಗು ಜಿಲ್ಲೆಯಲ್ಲಿರುವ ಇಲಾಖಾವಾರು ಸರ್ಕಾರಿ ಕಟ್ಟಡಗಳೆಷ್ಟು ; (ಹೆಸರುಗಳೊಂದಿಗೆ ವಿವರ ನೀಡುವುದು)

(ಆ) ಜಿಲ್ಲೆಯಲ್ಲಿ ಶಿಥಿಲಾವಸ್ಥೆಯಲ್ಲಿರುವ ಸರ್ಕಾರಿ ಕಟ್ಟಡಗಳ ಬದಲಿಗೆ ಹೊಸ ಕಟ್ಟಡಗಳನ್ನು ಕಟ್ಟಲು ಸರ್ಕಾರದ ಕ್ರಮಗಳೇನು ; (ವಿವರ ನೀಡುವುದು)

(ಇ) ೨೦೧೫–೧೬ನೇ ಸಾಲಿನಲ್ಲಿ ಕೊಡಗು ಜಿಲ್ಲೆಯಲ್ಲಿ ಎಷ್ಟು ಹೊಸ ಸರ್ಕಾರಿ ಕಟ್ಟಡಗಳನ್ನು ನಿರ್ಮಿಸಲು ಮಂಜೂರಾತಿ ನೀಡಲಾಗಿದೆ ; ಇಲ್ಲದಿದ್ದಲ್ಲಿ, ಹೊಸ ಸರ್ಕಾರಿ ಕಟ್ಟಡಗಳ ನಿರ್ಮಾಣ ಕೋರಿ ಎಷ್ಟು ಪ್ರಸ್ತಾವನೆಗಳು ಸರ್ಕಾರಕ್ಕೆ ಸಲ್ಲಿಕೆಯಾಗಿದೆ ; (ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು)

(ಈ) ಈ ಸರ್ಕಾರಿ ಕಟ್ಟಡಗಳ ನಿರ್ವಹಣೆಗಾಗಿ ವಿವಿಧ ಲೆಕ್ಕಶೀರ್ಷಿಕೆಯಡಿಯಲ್ಲಿ ಕಳೆದ ಮೂರು (೩) ವರ್ಷಗಳಿಂದ ಬಿಡುಗಡೆಯಾಗಿರುವ ಅನುದಾನವೆಷ್ಟು? (ಪೂರ್ಣ ವಿವರ ನೀಡುವುದು)

**ಕೃಷಿ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳು**

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)** –

೨೫೮ (೨೦೦೦) ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕೃಷಿ ಇಲಾಖೆಯಲ್ಲಿ ಗ್ರಾಮ ಪಂಚಾಯತ್ ಮಟ್ಟದಲ್ಲಿ ಮಂಜೂರಾದ ಹುದ್ದೆಗಳ ಸಂಖ್ಯೆ ಎಷ್ಟು ; ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವವರ ಸಂಖ್ಯೆ ಎಷ್ಟು ; ಹಾಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ;

(ಆ) ಈ ಹುದ್ದೆಗಳನ್ನು ನೇಮಕಾತಿ ಮಾಡದಿರಲು ಕಾರಣವೇನು ; ಈ ಹುದ್ದೆಗಳು ಖಾಲಿ ಇರುವುದರಿಂದ ಕೃಷಿ ಚಟುವಟಿಕೆಗಳಿಗೆ ತೀವ್ರ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡಿರುವ ಕ್ರಮಗಳು ಯಾವುವು ; (ತಾಲ್ಲೂಕುವಾರು ಸಂಪೂರ್ಣವಾದ ಮಾಹಿತಿ ನೀಡುವುದು)

(ಈ) ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ರೈತ ಸಂಪರ್ಕ ಕೇಂದ್ರಗಳೆಷ್ಟು ; ಇಲ್ಲಿ ಸೇವೆ ಸಲ್ಲಿಸುತ್ತಿರುವ ಕೃಷಿ ಅಧಿಕಾರಿಗಳ ಸಂಖ್ಯೆ ಎಷ್ಟು ; ಖಾಲಿ ಇರುವ ಕೃಷಿ ಅಧಿಕಾರಿಗಳ ಸಂಖ್ಯೆ ಎಷ್ಟು ; ಖಾಲಿ ಇರುವ ಹುದ್ದೆಗಳನ್ನು ನೇಮಕಾತಿ ಮಾಡುವ ಸಂಬಂಧ ಸರ್ಕಾರ ತೆಗೆದುಕೊಂಡಿರುವ ಕ್ರಮಗಳು ಯಾವುವು ; (ಸಂಪೂರ್ಣವಾದ ವಿವರ ನೀಡುವುದು)

(ಉ) ರೈತರಿಗೆ ವಿತರಿಸುವ ಬೀಜ ಮತ್ತು ರಾಸಾಯನಿಕ ಗೊಬ್ಬರ ಸಮರ್ಪಕವಾಗಿದೆಯೇ; ಸಮರ್ಪಕವಾಗಿದ್ದರೆ, ಸಮಯಕ್ಕೆ ಸರಿಯಾಗಿ ವಿತರಣೆಯಾಗದೆ ಹಳ್ಳಿಗಳಿಂದ ಬಂದ ರೈತರು ವಾರಗಟ್ಟಲೆ ಸದರಿ ಸಾಲಿನಲ್ಲಿ ನಿಂತು ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇದಕ್ಕೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳು ಯಾವುವು ?

## ರಾಜ್ಯದ ಹೆದ್ದಾರಿಗಳನ್ನು ಮೇಲ್ದರ್ಜೆಗೇರಿಸುವ ಮತ್ತು ಸುರಕ್ಷತೆ ಕುರಿತು

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು)** –

೨೫೯ (೨೦೦೮) ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಳೆದ ೩ ವರ್ಷಗಳಿಂದೀಚೆಗೆ ರಾಜ್ಯದ ಎಷ್ಟು ಹೆದ್ದಾರಿ ರಸ್ತೆಗಳನ್ನು ಮೇಲ್ದರ್ಜೆಗೇರಿಸಲಾಗಿದೆ ; ಮೀಸಲಿಟ್ಟಿದ್ದ ಅನುದಾನ ಮತ್ತು ಬಳಕೆಯ ವಿವರ ನೀಡುವುದು ;

(ಆ) ರಾಜ್ಯದಲ್ಲಿ ಒಟ್ಟು ಇರುವ ಹೆದ್ದಾರಿಗಳ ಸಂಖ್ಯೆ ಎಷ್ಟು ; ಹಾಗೂ ಅವುಗಳಲ್ಲಿ ಎಷ್ಟು ಹೆದ್ದಾರಿಗಳಲ್ಲಿ ಟೋಲ್ ಸಂಗ್ರಹಕ್ಕೆ ಅವಕಾಶ ನೀಡಲಾಗಿದೆ ;

(ಇ) ಹೆದ್ದಾರಿಗಳಲ್ಲಿ ಅಪಘಾತಗಳನ್ನು ತಡೆಯಲು ಯಾವ ಸುರಕ್ಷಿತ ಕ್ರಮಗಳನ್ನು ಕೈಗೊಳ್ಳಲಾಗಿದೆ ;

(ಈ) ರಸ್ತೆಗಳನ್ನು ಕಾಂಕ್ರೀಟಿನಿಂದ ಮಾಡುವುದರಿಂದ ಅಪಘಾತಗಳು ಹೆಚ್ಚಾಗಿವೆ ಎಂಬುದು ನಿಜವೇ ; ಹಾಗಿದ್ದಲ್ಲಿ, ಕಾರಣವೇನು ?

## ಪಟ್ಟಣ ಪಂಚಾಯಿತಿಗಳಿಗೆ ಒದಗಿಸಿರುವ ಅನುದಾನ ಹಾಗೂ ಮೂಲಭೂತ ಸೌಕರ್ಯ

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) –**

೨೬೦ (೨೨೧೧) ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ವಿಜಯಪುರ, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ ಪಟ್ಟಣ ಪಂಚಾಯ್ತಿಗಳಾಗಿ ಮೇಲ್ದರ್ಜೆಗೇರಿಸಿರುವ ಗ್ರಾಮ ಪಂಚಾಯ್ತಿಗಳ ಸಂಖ್ಯೆ ಎಷ್ಟು ; ಅವು ಯಾವುವು ;

(ಆ) ಅವುಗಳ ನಿರ್ವಹಣೆಗೆ ಒದಗಿಸಿರುವ ಅನುದಾನ ಎಷ್ಟು ;

(ಇ) ಮೂಲಭೂತ ಸೌಕರ್ಯಗಳನ್ನು ಕಲ್ಪಿಸದೇ ಅವ್ಯವಸ್ಥೆಗೆ ಕಾರಣವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಮೇಲ್ದರ್ಜೆಗೇರಿಸಿರುವ ಪಟ್ಟಣ ಪಂಚಾಯ್ತಿಗಳು ಯಾವುವು ; ಇವುಗಳ ನಿರ್ವಹಣೆಗೆ ಒದಗಿಸಿರುವ ಅನುದಾನ ಎಷ್ಟು ? (ತಾಲ್ಲೂಕುವಾರು ಹಾಗೂ ಒದಗಿಸಿರುವ ಅನುದಾನ ಸಹಿತ ವಿವರ ನೀಡುವುದು)

## ವಿದ್ಯುತ್ ವಿತರಣಾ ಸಮಸ್ಯೆಗಳು

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೬೧ (೨೨೧೬) ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿರುವ ವಿದ್ಯುತ್ ವಿತರಣಾ ವ್ಯವಸ್ಥೆಯ ವಿದ್ಯುತ್ ಪರಿವರ್ತಕಗಳು (ಟ್ರಾನ್ಸ್‌ಫಾರ್ಮರ್) ನಿರಂತರವಾಗಿ ಹಾಳಾಗಿ ವಿದ್ಯುತ್ ವಿತರಣಾ ವ್ಯವಸ್ಥೆಯಲ್ಲಿ ವ್ಯತ್ಯಯ ಉಂಟಾಗಿ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಆ) ಮಂಡ್ಯ ಜಿಲ್ಲೆಯಲ್ಲಿ ಈಗಾಗಲೇ ಕಾರ್ಯನಿರ್ವಹಿಸುತ್ತಿರುವ ವಿದ್ಯುತ್ ಪರಿವರ್ತಕಗಳೆಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಅವಶ್ಯವಿರುವ ವಿದ್ಯುತ್ ಪರಿವರ್ತಕಗಳ ಸಂಖ್ಯೆ ಎಷ್ಟು ; ಹಾಗಿದ್ದಲ್ಲಿ, ಅವುಗಳನ್ನು ಯಾವ ಕಾಲಮಿತಿಯಲ್ಲಿ ಪೂರೈಸಲಾಗುವುದು ;

(ಈ) ರೈತರಿಗೆ ತೊಂದರೆಯಾಗದಂತೆ ವಿದ್ಯುತ್ ಪರಿವರ್ತಕಗಳನ್ನು ಸರಿಪಡಿಸಲು ಸರ್ಕಾರ ಕೈಗೊಂಡ ಕ್ರಮವೇನು ? (ವಿವರ ನೀಡುವುದು)

## ಕೃಷಿ ವಿಶ್ವವಿದ್ಯಾಲಯದ ಬಗ್ಗೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) –**

೨೬೨ (೨೦೪೦) ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕೃಷಿ ವಿಶ್ವವಿದ್ಯಾಲಯದಲ್ಲಿ (ಗಾಂಧಿ ಕೃಷಿ ವಿಜ್ಞಾನ ಕೇಂದ್ರ) ಕಾರ್ಯ ನಿರ್ವಹಿಸುತ್ತಿರುವ ದಿನಗೂಲಿ ನೌಕರರಿಗೆ ಮೂಲ ವೇತನ ನಿಗಧಿಗೊಳಿಸುವ ಬಗ್ಗೆ ರಾಜ್ಯ ಉಚ್ಛ ನ್ಯಾಯಾಲಯವು ಆದೇಶ ನೀಡಿರುವುದು ನಿಜವೇ ; (ವಿವರ ನೀಡುವುದು)

(ಆ) ನೌಕರರ ವಿದ್ಯಾರ್ಹತೆಗೆ ಅನುಗುಣವಾಗಿ ಮೂಲ ವೇತನವನ್ನು ನಿಗಧಿಗೊಳಿಸುವಂತೆ ೨೦.೧೨.೨೦೧೩ ರಿಂದಲೇ ಅನ್ವಯವಾಗುವಂತೆ ಆದೇಶವಾಗಿರುವುದು ನಿಜವೇ ; ನಿಜವಾಗಿದ್ದಲ್ಲಿ, ಆದೇಶವನ್ನು ಯಾವಾಗ ಕಾರ್ಯರೂಪಕ್ಕೆ ತರಲಾಗುವುದು ?

## ರಾಜ್ಯದಲ್ಲಿರುವ ಒಟ್ಟು ಪೌರ ಕಾರ್ಮಿಕರ ಕುರಿತು

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) –**

೨೬೩ (೨೦೧೯) ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಒಟ್ಟು ಪೌರ ಕಾರ್ಮಿಕರ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಪೌರ ಕಾರ್ಮಿಕರಿಗೆ ಗುತ್ತಿಗೆ ಪದ್ಧತಿಯನ್ನು ರದ್ದುಪಡಿಸಿ, ಖಾಯಂ ನೇಮಕ ಮಾಡಿಕೊಳ್ಳುವುದಾಗಿ ಹಿಂದಿನ ಸದನದಲ್ಲಿ ಸಚಿವರು ಭರವಸೆಯನ್ನು ನೀಡಿದ್ದಾರೆಯೇ ;

(ಇ) ಈ ಭರವಸೆ ನೀಡಿದ್ದರೆ, ಇದುವರೆವಿಗೂ ಎಷ್ಟು ಪೌರ ಕಾರ್ಮಿಕರನ್ನು ಇಲಾಖೆಯಲ್ಲಿ ಖಾಯಂಗೊಳಿಸಲಾಗಿದೆ ? (ಜಿಲ್ಲಾವಾರು ಮಾಹಿತಿ ನೀಡುವುದು)

## ಕಳಪೆ ಮಟ್ಟದ ರಸ್ತೆ ದುರಸ್ತಿ ಕಾಮಗಾರಿಯಿಂದ ಸಂಭವಿಸುತ್ತಿರುವ ಅಪಘಾತಗಳ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) –**

೨೬೪ (೨೨೨೫) ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಳೆದ ಎರಡು ವರ್ಷಗಳಿಂದ ಮಂಡ್ಯ ಜಿಲ್ಲೆಯಲ್ಲಿ ಲೋಕೋಪಯೋಗಿ ಇಲಾಖೆಯು ಕೈಗೊಂಡ ರಸ್ತೆ ನಿರ್ಮಾಣ ಮತ್ತು ದುರಸ್ತಿ ಕಾಮಗಾರಿಗಳಾವುವು;

(ಆ) ಸದರಿ ಕಾಮಗಾರಿಗಳಿಗೆ ಬಿಡುಗಡೆ ಮಾಡಿರುವ ಹಣ ಎಷ್ಟು ; ಪೂರ್ಣಗೊಂಡ ಕಾಮಗಾರಿಗಳೆಷ್ಟು ; ಬಾಕಿ ಇರುವ ಕಾಮಗಾರಿಗಳೆಷ್ಟು ; (ತಾಲ್ಲೂಕುವಾರು ಕಾಮಗಾರಿವಾರು ಮಾಹಿತಿ ನೀಡುವುದು)

(ಇ) ಸದರಿ ಕಾಮಗಾರಿಗಳನ್ನು ನಿರ್ವಹಿಸುತ್ತಿರುವ ಗುತ್ತಿಗೆದಾರರು ಯಾರು ; (ಕಾಮಗಾರಿವಾರು ಗುತ್ತಿಗೆದಾರರ ಹೆಸರು ವಿಳಾಸ ನೀಡುವುದು)

(ಈ) ಈಗಾಗಲೇ ಪೂರ್ಣಗೊಂಡ ರಸ್ತೆ ದುರಸ್ತಿ ಡಾಂಬರೀಕರಣ ಕಾಮಗಾರಿಗಳನ್ನು ತುಂಬಾ ಕಳಪೆ ಮಟ್ಟದಲ್ಲಿ ನಿರ್ವಹಿಸಿದ್ದು, ಡಾಂಬರೀಕರಣ ಮಾಡಿದ ಎರಡು ತಿಂಗಳಲ್ಲಿ ರಸ್ತೆ ತುಂಬಾ ಹಳ್ಳಗಳು ಬಿದ್ದು, ರಸ್ತೆ ಅಪಘಾತಗಳು ಸಂಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಮಂಡ್ಯ ಜಿಲ್ಲೆ, ನಾಗಮಂಗಲ ತಾಲ್ಲೂಕು ಬೆಳ್ಳೂರಿನಿಂದ ಕುಂಚಹಳ್ಳಿ ಮಾರ್ಗವಾಗಿ ಹಾದು ಹೋಗುವ ರಸ್ತೆ ತುಂಬಾ ಹಾಳಾಗಿದ್ದು, ಈ ರಸ್ತೆಗೆ ಡಾಂಬರೀಕರಣ ಹಾಕಲು ಸರ್ಕಾರ ಕ್ರಮ ಕೈಗೊಳ್ಳುವುದೇ ? (ವಿವರ ನೀಡುವುದು)

## ರೈತರ ವಿದ್ಯುತ್ ಬಿಲ್ಲಿನ ಮೊತ್ತ ಮನ್ನಾ ಮಾಡುವ ಬಗ್ಗೆ

**ಶ್ರೀ ವಿವೇಕ್‌ರಾವ್ ವಸಂತರಾವ್ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೬೫ (೨೧೪೦) ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಳಗಾವಿ ಜಿಲ್ಲೆಯ ಕೃಷ್ಣಾ, ಘಟಪ್ರಭಾ, ಮಲಪ್ರಭಾ ಹಾಗೂ ಇನ್ನುಳಿದ ನದಿಗಳಿಂದ ಎಷ್ಟು ಸಮೂಹ ಏತ ನೀರಾವರಿಗಳಿಗೆ ಇಂಧನ ಇಲಾಖೆಯಿಂದ ವಿದ್ಯುತ್ ಪೂರೈಸಲಾಗುವುದು ;

(ಆ) ಸಮೂಹ ಏತ ನೀರಾವರಿಯಲ್ಲಿ ಎಷ್ಟು ಸಣ್ಣ ಮತ್ತು ಅತೀ ಸಣ್ಣ ರೈತರಿರುವರು; ಅವರು ಉಳಿಸಿಕೊಂಡಿರುವ ಬಾಕಿ ವಿದ್ಯುತ್ ಮೊತ್ತ ಎಷ್ಟು ; (ವಿವರ ನೀಡುವುದು)

(ಇ) ಸಮೂಹ ಏತ ನೀರಾವರಿ ಯೋಜನೆಯಲ್ಲಿ ವಿದ್ಯುತ್ ಉಪಯೋಗಿಸುತ್ತಿರುವ ಸಣ್ಣ ಹಾಗೂ ಅತೀ ಸಣ್ಣ ರೈತರ ಬಾಕಿ ಹಣವನ್ನು ಸರ್ಕಾರ ಏಕೆ ಮನ್ನಾ ಮಾಡಬಾರದು ; ಈ ವರ್ಷ ಬರಗಾಲವಿದ್ದುದ್ದರಿಂದ ಫಸಲಿನಲ್ಲಿ ವ್ಯತ್ಯಯವುಂಟಾಗಿ ರೈತರು ವಿದ್ಯುತ್ ಬಿಲ್ಲು ಸಂದಾಯ ಮಾಡಲು ಸಾಧ್ಯವಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಬಾಕಿ ವಿದ್ಯುತ್ ಬಿಲ್‌ನ ಮೊತ್ತವನ್ನು ಎಷ್ಟು ದಿನಗಳಲ್ಲಿ ಮನ್ನಾ ಮಾಡಲಾಗುವುದು? (ವಿವರ ನೀಡುವುದು)

## ರಾಷ್ಟ್ರೀಯ, ರಾಜ್ಯ ಮತ್ತು ಜಿಲ್ಲಾ ಮುಖ್ಯ ರಸ್ತೆಗಳು

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) –**

೨೬೬ (೨೧೪೫) ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಎಷ್ಟು ಕಿ.ಮೀ. ಉದ್ದದಲ್ಲಿ ರಾಷ್ಟ್ರೀಯ, ರಾಜ್ಯ ಹಾಗೂ ಜಿಲ್ಲಾ ಮುಖ್ಯ ರಸ್ತೆಗಳು ಅಸ್ತಿತ್ವದಲ್ಲಿವೆ ;

(ಆ) ಯಾವ ಯಾವ ತಾಲ್ಲೂಕುಗಳಲ್ಲಿ ಅಂತಹ ರಸ್ತೆಗಳು ಹಾದು ಹೋಗಿವೆ ; (ರಸ್ತೆವಾರು ಮಾಹಿತಿ ನೀಡುವುದು)

(ಇ) ಈ ರಸ್ತೆಗಳ ಅಭಿವೃದ್ಧಿಗೆ ಕೈಗೊಂಡಿರುವ ಕ್ರಮಗಳೇನು ;

(ಈ) ಇದುವರೆಗೆ ಯಾವ ರಸ್ತೆಗೆ, ಎಷ್ಟು ಹಣವನ್ನು ವೆಚ್ಚ ಮಾಡಲಾಗಿದೆ ; (ವಿವರ ನೀಡುವುದು)

(ಉ) ಯಾವ ಯಾವ ರಸ್ತೆಗಳ ಕಾಮಗಾರಿಗಳನ್ನು ಕಳಪೆ ಎಂದು ಗುರುತಿಸಲಾಗಿದೆ; ಆ ಕಳಪೆ ಕಾಮಗಾರಿಗಳಿಗೆ ಕಾರಣರಾರು ; ಅವರುಗಳ ಮೇಲೆ ಯಾವ ಕ್ರಮ ಜರುಗಿಸಲಾಗಿದೆ ? (ರಸ್ತೆವಾರು ವಿವರ ನೀಡುವುದು)

## ಲೋಕೋಪಯೋಗಿ ಇಲಾಖೆಯ SCP/TSP ಕಾಮಗಾರಿ ಬಗ್ಗೆ

**ಶ್ರೀಮತಿ ಜಯಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) –**

೨೬೭ (೨೧೨೧) ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ೨೦೧೬–೧೭ನೇ ಸಾಲಿನಲ್ಲಿ SCP/TSP ಯೋಜನೆಯಡಿ ಗ್ರಾಮೀಣ ರಸ್ತೆ ಮತ್ತು ಸಿ.ಸಿ. ರಸ್ತೆಗಳಿಗೆ ನೀಡಲಾಗಿರುವ ಅನುದಾನ ಎಷ್ಟು ;

(ಆ) ವಿಧಾನ ಪರಿಷತ್ತು ಸದಸ್ಯರು ವಾಸಿಸುವ ವಿಧಾನ ಸಭಾ ಕ್ಷೇತ್ರದಲ್ಲಿ ಪರಿಷತ್ತು ಸದಸ್ಯರು ಸೂಚಿಸುವ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ ;

(ಇ) SCP/TSP ಯೋಜನೆಯಡಿ ವಿಧಾನ ಪರಿಷತ್ತು ಸದಸ್ಯರಿಗೆ ಅನುದಾನ ನೀಡುವ ಉದ್ದೇಶ ಸರ್ಕಾರಕ್ಕೆ ಇದೆಯೇ ?

## ನಗರೋತ್ಥಾನ ಯೋಜನೆ

**ಶ್ರೀ ಆರ್. ಧರ್ಮಸೇನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೬೮ (೨೦೫೦) ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಮೈಸೂರು ಜಿಲ್ಲೆಯ ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿಗಳಲ್ಲಿ ಹಮ್ಮಿಕೊಂಡಿರುವ ನಗರೋತ್ಥಾನ ಯೋಜನೆಗಳಾವುವು ; ಇದಕ್ಕೆ ಸರ್ಕಾರದಿಂದ ಬಿಡುಗಡೆಯಾಗಿರುವ ಅನುದಾನ ಎಷ್ಟು ;

(ಆ) ಸರ್ಕಾರದಿಂದ ಮಂಜೂರಾದ ಹಣದಿಂದ ಆಯಾಯ ಯೋಜನೆಗಳ ಅಡಿಯಲ್ಲಿ ಕಾಮಗಾರಿಗಳು ಪ್ರಾರಂಭವಾಗಿವೆಯೇ ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಸದರಿ ಕಾಮಗಾರಿಗಳು ಮುಕ್ತಾಯಗೊಳ್ಳುವುದು ಯಾವಾಗ ?

## ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿಗಳಿಗೆ ಮಂಜೂರಾಗಿರುವ ಹುದ್ದೆಗಳು

**ಶ್ರೀ ಪ್ರಾಣೇಶ್ ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೯೯ (೨೧೨೨) ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಚಿಕ್ಕಮಗಳೂರು ಜಿಲ್ಲೆಯಲ್ಲಿ ಇರುವ ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿಗಳಿಗೆ ಮಂಜೂರಾಗಿರುವ ಹುದ್ದೆಗಳ ಸಂಖ್ಯೆ ಎಷ್ಟು ; ಅವುಗಳಲ್ಲಿ ಖಾಯಂ ಹಾಗೂ ತಾತ್ಕಾಲಿಕ ಹುದ್ದೆಗಳೆಷ್ಟು ; ಆ ಪೈಕಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ಚಿಕ್ಕಮಗಳೂರು ನಗರಸಭೆಯಲ್ಲಿ ನೂರಕ್ಕೂ ಹೆಚ್ಚು ಹುದ್ದೆಗಳು ಖಾಲಿ ಇದ್ದು, ಇದರಿಂದ ನಾಗರೀಕರಿಗೆ ಸಕಾಲದಲ್ಲಿ ಸೌಲಭ್ಯಗಳನ್ನು ಒದಗಿಸಲು ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಿದ್ದಲ್ಲಿ, ಜಿಲ್ಲೆಯಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ, ಹಾಗೂ ಈ ಹುದ್ದೆಗಳನ್ನು ಯಾವ ಕಾಲಮಿತಿಯೊಳಗೆ ಭರ್ತಿ ಮಾಡಲಾಗುವುದು ? (ವಿವರ ಒದಗಿಸುವುದು)

## ಮೂಡಿಗೆರೆ ಪಟ್ಟಣ ಪಂಚಾಯಿತಿಯ ಅಂಗಡಿಗಳ ಮಳಿಗೆಗಳ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) –**

೨೭೦ (೨೧೩೩) ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಮೂಡಿಗೆರೆ ಪಟ್ಟಣ ಪಂಚಾಯಿತಿ ವತಿಯಿಂದ ನಿರ್ಮಿಸಲಾಗಿರುವ ಅಂಗಡಿ ಮಳಿಗೆಗಳ ಸಂಖ್ಯೆ ಎಷ್ಟು ;

(ಆ) ಈ ಅಂಗಡಿ ಮಳಿಗೆಗಳನ್ನು ನಿಯಮಾನುಸಾರ ಬಾಡಿಗೆದಾರರಿಗೆ ಹಂಚಿಕೆ ಮಾಡಲಾಗಿದೆಯೇ ; ಎಷ್ಟು ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ಜನರಿಗೆ ಮಳಿಗೆ ಹಂಚಿಕೆ ಮಾಡಲಾಗಿದೆ ;

(ಇ) ಈ ಅಂಗಡಿ ಮಳಿಗೆಗಳಿಂದ ಪಟ್ಟಣ ಪಂಚಾಯಿತಿಗೆ ಬರುತ್ತಿರುವ ವಾರ್ಷಿಕ ಆದಾಯವೆಷ್ಟು ;

(ಈ) ಈ ಅಂಗಡಿ ಮಳಿಗೆಗಳನ್ನು ಮಂಜೂರು ಮಾಡುವ ಪ್ರಕ್ರಿಯೆ ಯಾವ ವರ್ಷದಲ್ಲಿ ನಡೆದಿದೆ ; ಈ ಅಂಗಡಿ ಮಳಿಗೆಗಳನ್ನು ಪಡೆದ ಪರವಾನಗಿದಾರರು ಬಳಕೆ ಮಾಡುತ್ತಿದ್ದಾರೆಯೇ; ಅಥವಾ ಒಳ ಬಾಡಿಗೆ (Sub-Lease) ನೀಡಲಾಗಿದೆಯೇ ?

ಶ್ರೀನಿವಾಸ
ಕಾರ್ಯದರ್ಶಿ(ಪ್ರ)
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಮುದ್ರಣಾಲಯ, ವಿಕಾಸಸೌಧ, ಬೆಂಗಳೂರು, ಪಿ7, ಕಾ.ಸೂ 319, ಪ್ರತಿಗಳು 1500